ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು

ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ನೋಂದಣಿ/02/2018–19 ದಿನಾಂಕ 10/10/2018

–ಸುತ್ತೋಲೆ–

**ವಿಷಯ :** 2002 ಹಾಗೂ ಹಿಂದಿನ ಪುನರಾವರ್ತಿತ ಅಭ್ಯರ್ಥಿಗಳನ್ನು ಏಪ್ರಿಲ್–2019 ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ನೋಂದಣಿ ಮಾಡುವ ಬಗ್ಗೆ.

**ಉಲ್ಲೇಖ :** 1) ಮಾನ್ಯ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಇವರ ಅಧ್ಯಕ್ಷತೆಯಲ್ಲಿ ನಡೆದ ಸಭಾ ನಡಾವಳಿಗಳ ದಿನಾಂಕ:20.08.2018

2) ಈ ಕಛೇರಿಯ ಅಧಿಸೂಚನೆ ಸಂ. ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್–2019/21/2018–19 ದಿನಾಂಕ 20/09/2018

3) ಈ ಕಛೇರಿ ಪತ್ರ ಸಂ. ಗಣಕಶಾಖೆ/ಎಸ್.ಎಸ್.ಎಲ್.ಸಿ/ನೋಂದಣಿ/01/2018–19 ದಿ:28–09–2018

*****

ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಎಸ್.ಎಸ್.ಎಲ್.ಸಿ ಏಪ್ರಿಲ್–2019ರ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ನೋಂದಣಿ ಕಾರ್ಯವನ್ನು SATS ಜಾಲತಾಣದಲ್ಲಿ ಪಡೆಯುವ ಸಲುವಾಗಿ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಮಾನ್ಯತೆ ಪಡೆದಿರುವ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳ ಮುಖ್ಯಸ್ಥರು ತಮ್ಮ ಶಾಲೆಯ (ಶಾಲಾ ಅಭ್ಯರ್ಥಿ, ಖಾಸಗಿ ಅಭ್ಯರ್ಥಿ, ಪುನರಾವರ್ತಿತ ಶಾಲಾ ಹಾಗೂ ಖಾಸಗಿ ಅಭ್ಯರ್ಥಿಗಳ) ಏಪ್ರಿಲ್ –2019 ರ ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ತೆಗೆದುಕೊಳ್ಳುವ ವಿದ್ಯಾರ್ಥಿಗಳ ವಿವರಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡುವಂತೆ ಉಲ್ಲೇಖ–3 ರಲ್ಲಿ ತಿಳಿಸಲಾಗಿತ್ತು.

ಮುಂದುವರಿದು, 2002 ಮತ್ತು ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR ಮತ್ತು NSPR ಪುನರಾವರ್ತಿತ ಅಭ್ಯರ್ಥಿಗಳ ವಿವರಗಳನ್ನು ಶಾಲೆಯಲ್ಲಿ ಲಭ್ಯವಿರುವ ಎಂಎಸ್ಎ ಹಾಗೂ ಶಾಲೆಯಲ್ಲಿ ಲಭ್ಯವಿಲ್ಲದಿದ್ದಲ್ಲಿ ಸಂಬಂಧಿಸಿದ ವಿಭಾಗೀಯ ಕಛೇರಿಯಿಂದ ದ್ವಿತೀಯ ಪ್ರತಿ ಎಂಎಸ್ಎಯನ್ನು ಪಡೆದು ಪೂರ್ಣ ಮಾಹಿತಿ, ಭಾವಚಿತ್ರ ಮತ್ತು ಸಹಿಯನ್ನು ಒಳಗೊಂಡ ಮಾಹಿತಿಯ ಎಂಎಸ್ಎ ಅರ್ಜಿಯನ್ನು ಭೌತಿಕವಾಗಿ ಮಂಡಳಿಗೆ ರವಾನಿಸಲು ಈ ಮೂಲಕ ಸೂಚಿಸಿದೆ. 2002 ಮತ್ತು ಅದಕ್ಕಿಂತ ಹಿಂದಿನ ವರ್ಷಗಳಲ್ಲಿ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಅನುತ್ತೀರ್ಣರಾದ NSR ಮತ್ತು NSPR ಪುನರಾವರ್ತಿತ ಅಭ್ಯರ್ಥಿಗಳ ಮಾಹಿತಿಯನ್ನು SATS ಜಾಲತಾಣದಲ್ಲಿ ಅಪ್ ಲೋಡ್ ಮಾಡುವ ಅಗತ್ಯವಿರುವುದಿಲ್ಲ.

11/10/18

(ಸುಮಂಗಲ. ವಿ)
ನಿರ್ದೇಶಕರು, ಪರೀಕ್ಷೆಗಳು

ಅಗತ್ಯ ಕ್ರಮಕ್ಕಾಗಿ :

1) ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರುಗಳಿಗೆ
2) ರಾಜ್ಯದ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ
3) ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗು ಮಾನ್ಯತೆ ಪಡೆದಿರುವ ಖಾಸಗಿ ಅನುದಾನರಹಿತ ಪ್ರೌಢಶಾಲೆಗಳ ಮುಖ್ಯಸ್ಥರಿಗೆ